ಸಂಪುಟ : 10 ಸಂಚಿಕೆ: 87 ಪುಟ : 4+2 ಬೆಲೆ: 3.00 ಮಂಗಳವಾರ ಮೇ 06 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 87 Pages : 4+2 Price : 3.00 Tuesday May 06 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಡಾ. ರವಿ ಗುಂಜೀಕರ್ ಸೇವಾ ನಿವೃತ್ತಿಯ ನಿಮಿತ್ತ ಜರುಗಿದ ಸಮಾಜಮುಖಿ ಕಾರ್ಯಗಳು

# 'ಸಾರ್ಥಕ ರವಿ ಸಂವತ್ಸರ' ಅಭಿನಂದನಾ ಸಮಾರಂಭ ಇಂದು



> ತಮ್ಮ ಸಂಘಟನಾ ಶಕ್ತಿಯ ಮೂಲಕ ಡಾ. ರವಿ ಗುಂಜೀಕರ್ ಮೂರು ದಶಕಗಳ ಕಾಲ ಸರಕಾರಿ ಸೇವೆ ಸಲ್ಲಿಸಿ, ಸರಕಾರಿ ನೌಕರರ ಸಂಘವನ್ನು ಸಶಕ್ತವಾಗಿ ಸಂಘಟಿಸಿದ್ದಾರೆ. ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಮತ್ತು ರವಿ ಗುಂಜೀಕರ್ ಮಾರ್ಗದರ್ಶನದಲ್ಲಿ ಸಂಘವನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯುವ ಪ್ರಯತ್ನ ಮಾಡುತ್ತೇನೆ.
>
> **– ಡಾ. ಬಸವರಾಜ ಬಳ್ಳಾರಿ.**
> ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರು.

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ರವಿ ಗುಂಜೀಕರ್ ಅವರ ಸೇವಾ ನಿವೃತ್ತಿಯಿಂದ ತೆರವಾದ ಸ್ಥಾನಕ್ಕೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ ಆಯ್ಕೆಯಾಗಿದ್ದಾರೆ. ಗುಂಜೀಕರ್ ನಿವೃತ್ತಿಗೂ ಮುನ್ನ ನಡೆದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಡಾ. ಬಸವರಾಜ ಬಳ್ಳಾರಿ ಬಹುಮತದೊಂದಿಗೆ ಆಯ್ಕೆಯಾಗಿದ್ದಾರೆ. ರವಿ ಗುಂಜೀಕರ್ ಅವರ ಸಮಾಜಮುಖಿ ಕಾರ್ಯ, ಅಭಿನಂದನಾ ಸಮಾರಂಭಕ್ಕೆ ಡಾ. ಬಸವರಾಜ ಬಳ್ಳಾರಿ ಬೆನ್ನೆಲುಬಾಗಿದ್ದಾರೆ.






**■ ವಿಜಯಸಾಕ್ಷಿ ಸುದ್ದಿ, ಗದಗ**


ಇದೇ ಎಪ್ರಿಲ್ 30ರಂದು ಡಾ. ರವಿ ಗುಂಜೀಕರ್ ಸರಕಾರಿ ಸೇವೆಯಿಂದ ನಿವೃತ್ತರಾಗಿದ್ದರೂ, ಅವರ ಸಾಮಾಜಿಕ ಕಾಳಜಿ, ಸಮಾಜ ಸೇವೆಗೆ ಅಂದೇ ಹೊಸ ಮುನ್ನುಡಿ ಬರೆದರು. ಡಾ. ರವಿ ಗುಂಜೀಕರ್ ಅಭಿಮಾನಿ ಬಳಗ ಹಾಗೂ ಸರಕಾರಿ ನೌಕರರ ಸಂಘದ ಸರ್ವ ಸದಸ್ಯರು, ವಿವಿಧ ಸಂಘಗಳ ಆಶ್ರಯದಲ್ಲಿ ಡಾ. ರವಿ ಗುಂಜೀಕರ್ ಅವರ ಸೇವಾ ನಿವೃತ್ತಿ ನಿಮಿತ್ತ ಅಭಿನಂದನಾ ಸಮಾರಂಭವನ್ನು ಸ್ಮರಣೀಯ ಹಾಗೂ ಸಮಾಜಮುಖಿಯಾಗಿಸಬೇಕು ಎಂದು ಹಲವಾರು ವಿಧಾಯಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮಾದರಿಯಾದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ನಿವೃತ್ತ ಜಿಲ್ಲಾ ಅಧಿಕಾರಿ ಹಾಗೂ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಹಿರಿಯ ಉಪಾಧ್ಯಕ್ಷ, ಜಿಲ್ಲಾ ಘಟಕದ ಅಧ್ಯಕ್ಷ ಡಾ. ರವಿ ಗುಂಜೀಕರ್ ಅವರ ಸೇವಾ ನಿವೃತ್ತಿಯ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ಸಮಾಜಮುಖಿ ಕಾರ್ಯಗಳು, ಗುಂಜೀಕರ್ ಅವರ ಮುಂದಿನ ಸಾಮಾಜಿಕ ಸೇವೆಗೆ ಮುನ್ನುಡಿಯಾಗಿದೆ.

ಮೇ 1ರಂದು 60 ಜನ ಪೌರ ಕಾರ್ಮಿಕರಿಗೆ ಸನ್ಮಾನ ಆಯೋಜಿಸುವ ಮೂಲಕ ಡಾ. ರವಿ ಗುಂಜೀಕರ್ ಅಭಿಮಾನಿ ಬಳಗ ವಿಶಿಷ್ಟ ಕಾರ್ಯಕ್ರಮಕ್ಕೆ ನಾಂದಿ ಹಾಡಿತು. ಮುಂದಿನ 6 ದಿನಗಳ ಅವಧಿಯಲ್ಲಿ ನೌಕರರ ಭವನದಲ್ಲಿ 60ಕ್ಕೂ ಹೆಚ್ಚು ಜನರಿಂದ ಸ್ವಯಂಪ್ರೇರಿತ ರಕ್ತದಾನ ಶಿಬಿರ, ಮಣಕವಾಡದ ಶ್ರೀಗಳ ನೇತೃತ್ವದಲ್ಲ 60 ಸಸಿ ನೆಡುವ ಮೂಲಕ ವನಮಹೋತ್ಸವ ಆಚರಣೆ, ಸರಕಾರಿ ಆಸ್ಪತ್ರೆ ಹಾಗೂ ಬುದ್ಧಿಮಾಂಧ್ಯ ಮಕ್ಕಳಿಗೆ ಹಾಲು-ಹಣ್ಣು ವಿತರಣೆ, ಮಹಿಳಾ ನೌಕರರ ದಿನಾಚರಣೆ ಅಂಗವಾಗಿ ಜಿಲ್ಲೆಯ 60 ಜನ ಸಾಧಕ ಮಹಿಳೆಯರನ್ನು ಗೌರವಿಸುವ ಕಾರ್ಯಗಳಾದವು. ವಿಶೇಷವಾಗಿ ಡಾ. ರವಿ ಗುಂಜೀಕರ್ ತಾವು ಕಲಿತ ಸರಕಾರಿ ಹಿರಿಯ ಕನ್ನಡ ಗಂಡು ಮಕ್ಕಳ ಶಾಲೆ ನಂ. 2ನ್ನು ದತ್ತು ತೆಗೆದುಕೊಳ್ಳುವ ಮೂಲಕ ತಮ್ಮ ಸೇವಾ ನಿವೃತ್ತಿಗೆ ಸಾರ್ಥಕತೆ ತಂದುಕೊಟ್ಟರು. ಮೂರು ದಶಕಗಳ ಕಾಲ ಸರಕಾರಿ ಸೇವೆ ಸಲ್ಲಿಸಿ, ಸತತ ಮೂರು ಬಾರಿ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾಗಿದ್ದ ರವಿ ಗುಂಜೀಕರ್ ಅವರಿಗೆ ಅವರ ಅಭಿಮಾನಿ ಬಳಗ, ಸರಕಾರಿ ನೌಕರರ ಸಂಘ, ವೃಂದ ಸಂಘಗಳು ಹಾಗೂ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಮೇ 6ರಂದು ಮುಂಜಾನೆ 10.30ಕ್ಕೆ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ 'ಸಾರ್ಥಕ ರವಿ ಸಂವತ್ಸರ' ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಸಮಾರಂಭದಲ್ಲಿ ವಿವಿಧ ಕ್ಷೇತ್ರದ 60 ಜನ ಸಾಧಕರನ್ನು ಸನ್ಮಾನಿಸಲಾಗುತ್ತಿದೆ. ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ಕಾರ್ಯಕ್ರಮದ ಸಾನ್ನಿಧ್ಯ ವಹಿಸಲಿದ್ದು, ಸಭಾಪತಿ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸುವರು. ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹಾಗೂ ಸರಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಸಭಾ ಕಾರ್ಯಕ್ರಮದ ನಂತರ ಪ್ರತಿಷ್ಠಿತ ಗಂಧರ್ವ ಇವೆಂಟ್ಸ್ ಬೆಂಗಳೂರು ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.



# ಗಣಿತ ಕಬ್ಬಿಣದ ಕಡಲೆಯಲ್ಲ




**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪ್ರತಿಯೊಂದು ವಿಷಯದ ಬಗ್ಗೆ ಸತತ ಅಧ್ಯಯನಶೀಲರಾದಾಗ ಯಾವ ವಿಷಯವೂ ಕಠಿಣವಾಗುವುದಿಲ್ಲ. ಗಣಿತ ವಿಷಯ ಮನುಷ್ಯನನ್ನು ತರ್ಕ-ಕ್ಕೆ ತೆಗೆದುಕೊಂಡು ಹೋಗುವ ಮೂಲಕ ಮನುಷ್ಯನ ಬುದ್ಧಿಶಕ್ತಿ ಹೆಚ್ಚಿಸಲು ಸಹಾಯ ಮಾಡುತ್ತದೆ. ಆದುದರಿಂದ ಗಣಿತ ವಿಷಯವು ಎಂದಿಗೂ ಕಬ್ಬಿಣದ ಕಡಲೆಯಲ್ಲ ಎಂದು ಶಿಕ್ಷಕಿ ವಿದ್ಯಾವತಿ ಪಾಟೀಲ ಹೇಳಿದರು.

ಅವರು ಪಟ್ಟಣದ ಕನಕದಾಸ ಶಿಕ್ಷಣ ಸಮಿತಿಯಲ್ಲಿ ಗದಗ ಐಕಾನ್ ಸಂಸ್ಥೆಯಿಂದ ಜರಗುತ್ತಿರುವ ಬೇಸಿಗೆ ಶಿಬಿರದಲ್ಲಿ ಮಕ್ಕಳೊಂದಿಗೆ ಸಂವಾದ ನಡೆಸಿ ಮಾತನಾಡಿದರು.

ಐಕಾನ್ ಸಂಸ್ಥೆಯ ನಾಗರಾಜ ಬಂಡಿ ಮಾತನಾಡಿ, ಒಬ್ಬರಿಗೊಬ್ಬರು ಚರ್ಚೆ ನಡೆಸಿ ಅಭ್ಯಾಸದಲ್ಲಿ ತೊಡಗಿಕೊಂಡಾಗ ಮೆದುಳು ಹೆಚ್ಚು ಕ್ರೀಯಾಶೀಲವಾಗಿ ಇರಲು ಸಾಧ್ಯವಾಗುತ್ತದೆ ಎಂದರು.

ಶಿವಲಿಂಗಪ್ಪ ಕೊಂಡಿಕೊಪ್ಪ, ದಾವಲಸಾಬ ಲಾಡಸಾಬನವರ, ಪೂಜಾ ಮ್ಯಾಗೇರಿ, ರೇಷ್ಮಾ ಪರ್ವತಗೌಡರ, ಶಿವಲೀಲಾ ಕೋರಿ, ರುಭೀಯಾ ನಮಾಜಿ, ಲಕ್ಷ್ಮೀ ಕೆಲಗಾರ, ನಿಷಾಣಮತ ಲಾಡಸಾಬನವರ, ಆಶೀಫ್ ನದಾಫ್ ಇದ್ದರು.

# ಸರ್ಕಾರಿ ನೌಕರರ ತುಟ್ಟಿ ಭತ್ಯೆ ಹೆಚ್ಚಳ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಸಿಹಿ ಸುದ್ದಿಯೊಂದನ್ನು ನೀಡಿದ್ದು, ಸರ್ಕಾರಿ ನೌಕರರ ತುಟ್ಟಿ ಭತ್ಯೆ ಹೆಚ್ಚಿಸಿ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರಿ ನೌಕರರಿಗೆ ಸರ್ಕಾರಿ ನೌಕರರಿಗೆ ತುಟ್ಟಿಭತ್ಯೆಯನ್ನು ಶೇ.1.50ರಷ್ಟು ಹೆಚ್ಚಿಸಿ ಆದೇಶ ಹೊರಡಿಸಿದೆ. ಈ ಕುರಿತಂತೆ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಮಾಹಿತಿ ಹಂಚಿಕೊಂಡಿದ್ದು, ರಾಜ್ಯ ಸರ್ಕಾರವು ಸರ್ಕಾರಿ ನೌಕರರಿಗೆ ದಿನಾಂಕ 01-01-2025ರಿಂದ ಅನ್ವಯವಾಗುವಂತೆ ಶೇ.1.50 ತುಟ್ಟಿಭತ್ಯೆಯನ್ನು ಹೆಚ್ಚಿಸಿ ಅನುಮೋದನೆ ನೀಡಿದೆ ಎಂಬುದಾಗಿ ತಿಳಿಸಿದ್ದಾರೆ.

ರಾಜ್ಯ ಸರ್ಕಾರಿ ನೌಕರರ ತುಟ್ಟಿಭತ್ಯೆಯನ್ನು ಶೇ.10.75ರಿಂದ 12.25ರಷ್ಟು ಅಂದರೆ 1.50ರಷ್ಟು ಹೆಚ್ಚಿಸಿದೆ. ಸಿಎಂ ಸಿದ್ಧರಾಮಯ್ಯಗೆ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಗೆ ನೌಕರರ ಪರವಾಗಿ ರಾಜ್ಯಾಧ್ಯಕ್ಷ ಸಿಎಸ್ ಷಡಕ್ಷರಿ ಧನ್ಯವಾದಗಳನ್ನು ತಿಳಿಸಿದ್ದಾರೆ.

**ಇಂದು ಡಾ. ರವಿ ಗುಂಜೀಕರರ ಸೇವಾ ನಿವೃತ್ತಿ, ಅಭಿನಂದನಾ ಸಮಾರಂಭದ ಪ್ರಯುಕ್ತ ಲೇಖನ**

# ಸಂಘಟನಾ ಚತುರ, ಸ್ನೇಹಜೀವಿ ರವಿ ಗುಂಜೀಕರ



ಸ್ನೇಹಜೀವಿ, ಸಂಘಟನಾ ಚತುರ, ಸಮರ್ಥ ಆಡಳಿತಗಾರ, ಅಭಿವೃದ್ಧಿಯ ಕನಸುಗಾರ, ವೃತ್ತಿ ಮತ್ತು ಸಂಘಟನೆಯಲ್ಲಿ ಸಮನ್ವಯತೆ ಮೈಗೂಡಿಸಿಕೊಂಡ, ಹೋರಾಟದ ನೆಲೆಗಟ್ಟಿನ ಪರಿಸದಲ್ಲಿ ತಮ್ಮ ವ್ಯಕ್ತಿತ್ವ ರೂಪಿಸಿಕೊಂಡು ವೃತ್ತಿ, ಸಂಘಟನೆ ಮತ್ತು ಬದುಕಿನಲ್ಲಿ ಸಾರ್ಥಕ 60 ಸಂವತ್ಸರ ಪೂರೈಸಿ ವಯೋಸಹಜ ಸೇವಾ ನಿವೃತ್ತಿ ಹೊಂದಿದ ಡಾ. ರವಿ ಎಲ್. ಗುಂಜೀಕರ ಅವರ ಅಭಿನಂದನಾ ಸಮಾರಂಭವನ್ನು ಅವರ ಅಭಿಮಾನಿ ಬಳಗ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ, ಜಿಲ್ಲೆಯ ವಿವಿಧ ವೃಂದ ಸಂಘಗಳ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಕುಟುಂಬ ವರ್ಗದವರೆಲ್ಲ ಸೇರಿಕೊಂಡು ವಿಧಾಯಕ ಮತ್ತು ರಚನಾತ್ಮಕ ಕಾರ್ಯಕ್ರಮಗಳ ಮೂಲಕ ವಿಭಿನ್ನ ರೂಪದಲ್ಲಿ ಅಯೋಜನೆಗೊಂಡು ಜನರ ಗಮನ ಕೇಂದ್ರೀಕರಿಸಿದೆ.

ಜಿಲ್ಲೆಯ ಹಿರಿಯ ಸಾಹಿತಿ ಐ.ಕೆ. ಕಮ್ಮಾರ ಮತ್ತು ವಿಶ್ವನಾಥ ಕಮ್ಮಾರ, ಡಾ. ಬಸವರಾಜ ವಿ.ಬಳ್ಳಾರಿ ಇವರ ಸಂಪಾದಕತ್ವದಲ್ಲಿ 'ನೌಕರರ ನಾವಿಕ' ಅಭಿನಂದನಾ ಗ್ರಂಥ ಪ್ರಕಟಣೆ, ಬಸವ ಜಯಂತುತ್ಸವ, 60 ಸಸಿಗಳನ್ನು ನೆಡುವ ಮೂಲಕ ವನಮಹೋತ್ಸವದ ಅರ್ಥಪೂರ್ಣ ದಿನಾಚರಣೆಯಲ್ಲಿ ಸಾಲುಮರದ ತಿಮ್ಮಕ್ಕಳಿಗೆ ಗೌರವ, ಉತ್ತಮವಾಗಿ ಸೇವೆ ಸಲ್ಲಿಸುತ್ತಿರುವ ಜಿಲ್ಲೆಯ 60 ಪೌರ ಕಾರ್ಮಿಕರಿಗೆ ಸೇವಾರತ್ನ ಪ್ರಶಸ್ತಿ ಪ್ರದಾನ-ಸನ್ಮಾನ, ಅಭಿಮಾನಿ ಬಳಗದ 60 ಸದಸ್ಯರು ಮತ್ತು ಶಿಷ್ಯರಿಂದ ರಕ್ತದಾನ ಶಿಬಿರ, ವಿವಿಧ ಇಲಾಖೆಯಲ್ಲಿ ಕ್ರಿಯಾಶೀಲವಾಗಿ ಕಾರ್ಯ ಮಾಡುತ್ತಿರುವ ಮಹಿಳಾ ನೌಕರರನ್ನು ಸನ್ಮಾನಿಸುವ ಮೂಲಕ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ, ಜಿಲ್ಲಾಸ್ಪತ್ರೆಯ 60 ರೋಗಿಗಳಿಗೆ ಮತ್ತು ಬುದ್ಧಿಮಾಂದ್ಯ ಮಕ್ಕಳಗೆ ಹಣ್ಣು-ಹಾಲು ವಿತರಣೆ, ತಾವು ಕಲಿತ ಗದಗ ಶಹರದ ಸರಕಾರಿ ಹಿರಿಯ ಕನ್ನಡ ಗಂಡು ಮಕ್ಕಳ ಪ್ರಾಥಮಿಕ ಶಾಲೆ ನಂ-2 ದತ್ತು ಸ್ವೀಕಾರ, ಬೀದಿ ಚಹಾದಂಗಡಿ ಮಾಲಿಕ, ನೀರಗಂಟಿ, ಮಹಿಳಾ ಚಾಲಕಿ, ಅಸ್ಪತ್ರೆಯ ಕ್ಲೀನರ್, ಕೂಲಿ, ತರಕಾರಿ ಮಾರುವವರು, ಶವಾಗಾರ ಕಾರ್ಮಿಕ, ದೇಶಕಾಯುವ ಸೈನಿಕ, ಅನ್ನ ನೀಡಯುವ ಸಾವಯವ ಕೃಷಿಕ ಹೀಗೆ ನಿತ್ಯ ತಮ್ಮ ಜೀವನೋಪಾಯ ವೃತ್ತಿ ಬದುಕಿನಿಂದ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಕೊಡುಗೆ ನೀಡುತ್ತಿರುವ ಎಲೆಮರೆ ಕಾಯಿಯಾಗಿರುವ 60 ಜನ ಕೆಲಸಗಾರರನ್ನು ಅಭಿನಂದಿಸುವ ಮೂಲಕ ಗದಗ ಪರಿಸರದಲ್ಲಿ ಹೊಸ ಚರಿತ್ರೆಗೆ ಭಾಷ್ಯ ಬರೆ-ಯುತ್ತಿದೆ ಈ ಕಾರ್ಯಕ್ರಮ.

ರವಿ ಗುಂಜೀಕರರು 1965 ಎಪ್ರಿಲ್ 4ರಂದು ಬೆಳಗಾವಿ ನಗರದ ಬಾಸಬಾಗನಲ್ಲಿ ಲಕ್ಷ್ಮಣ ಹಾಗೂ ಪಾರ್ವತಮ್ಮ ಅವರ ಪುಣ್ಯಗರ್ಭದಲ್ಲಿ ಪ್ರೀತಿಯ ಮಗನಾಗಿ ಜನಿಸಿದರು. ಇವರ ತಂದೆ ಲಕ್ಷ್ಮಣರವರು ಕೇಂದ್ರ ಸರಕಾರದ ಅಂಚೆ ಇಲಾಖೆಯ ಅಧೀಕ್ಷಕರಾಗಿ ಸೇವೆ ಸಲ್ಲಿಸಿದ್ದಾರೆ. ಸಮಾಜಶಾಸ್ತ್ರ ವಿಷಯದಲ್ಲಿ ಸ್ನಾತಕೋತ್ತರ ಪದವಿ ಗಳಿಸಿರುವ ಇವರು 1985ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ರೋಣ ತಾಲೂಕಿನ ಹಿರೇಹಾಳ ವಸತಿ ನಿಲಯ ಪಾಲಕರಾಗಿ ತಮ್ಮ ಸರಕಾರಿ ಸೇವೆ ಪ್ರಾರಂಭಸಿದರು. 1992ರಲ್ಲಿ ಸವದತ್ತಿ ವಸತಿ ನಿಲಯಕ್ಕೆ ವರ್ಗಾವಣೆಗೊಂಡು 5 ವರ್ಷಗಳ ಕಾಲ ಕೆಲಸ ಮಾಡಿ, 1998ರಲ್ಲಿ ಗದಗ ಜಿ.ಪಂ ಜಲನಿರ್ಮಾಣ ಯೋಜನೆ ವಿಭಾಗದಲ್ಲಿ ಅಧೀಕ್ಷರಾಗಿ, 2009ರಲ್ಲಿ ಗದಗ ತಾಲೂಕು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಹಾಯಕ ಕಲ್ಯಾಣಾಧಿಕಾರಿಯಾಗಿ ಮತ್ತು 2006ರಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಚಾರ್ಯರಾಗಿ ವಿಶಿಷ್ಠ ಸೇವೆಯನ್ನು ಸಲ್ಲಿಸಿದ್ದಾರೆ.

2012ರಿಂದ ಗದಗ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯಾಗಿ 2020ರಿಂದ ವಕ್ಫ್ ಹಿಂದುಳಿದ ಅಲ್ಪ ಸಂಖ್ಯಾತ ಇಲಾಖೆ-ಸಮುದಾಯ ಕಲ್ಯಾಣ ಇಲಾಖೆಯಿಂದ ಕಾರ್ಯ ಮಾಡಲು ಪ್ರಾರಂಭಿಸಿದಾಗ ಗದಗ ಜಿಲ್ಲಾ ಶಾಖೆಯ ಜಿಲ್ಲಾ ಅಧಿಕಾರಿಯಾಗಿ ಸಮರ್ಥವಾಗಿ ಕಾರ್ಯನಿರ್ವಹಿಸಿ ನೂತನ ಮೌಲಾನ ಭವನ ನಿರ್ಮಾಣ, ಅಲ್ಪ ಸಂಖ್ಯಾತ ಸಮುದಾಯದ ಎಲ್ಲಾ ಕೆಲಸಗಳು ಒಂದೇ ಸೂರಿನಡಿ ಸಂಪನ್ನಗೊಳ್ಳಲು ಕಾರ್ಯ ಕೈಗೊಂಡರು. 2022ರಲ್ಲಿ ಪದೋನ್ನತಿ ಹೊಂದಿ ಗದಗ ಜಿಲ್ಲಾ ಹಿಂದುಳಿದ ಇಲಾಖೆಯ ಉಪನಿರ್ದೇಶಕರಾಗಿ ಇಲಾಖೆಯ ಘನತೆಗೆ ಚ್ಯುತಿ ಬಾರದಂತೆ ಪ್ರಾಮಾಣಿಕತೆ ಮತ್ತು ಸಮನ್ವಯತೆಯಿಂದ ಕೆಲಸ ಮಾಡಿ ಎಪ್ರಿಲ್ 30ರಂದು ಸೇವಾ ನಿವೃತ್ತಿ ಹೊಂದಿದರು.

2006ರ ನಂತರ ನೇಮಕಗೊಂಡ ನೌಕರರಿಗೆ ಜಾರಿಯಲ್ಲಿರುವ ಎನ್.ಪಿ.ಎಸ್. ಪದ್ಧತಿ ರದ್ದುಗೊಳಿಸಿ ಹಳೆ ಓಪಿಸಿ ಪದ್ಧತಿ ಜಾರಿಗೊಳಿಸುವಂತೆ ಮಾಡುವ ಹೋರಾಟದಲ್ಲಿ 'ರಕ್ತ ಕೊಟ್ಟೇವು ಪಿಂಚಣಿ ಬಿಡೆವು' ಎಂಬ ವಿನೂತನ ಹೋರಾಟದ ಮೂಲಕ ಸರಕಾರ ಗಮನ ಸೆಳೆಯುವಲ್ಲಿ ಇವರ ಸಂಘಟನಾ ಶಕ್ತಿ ಅನುಕರಣೀಯ.

ಪ್ರತಿವರ್ಷ ಸರಕಾರಿ ನೌಕರರಿಗೆ ಏರ್ಪಡಿಸುವ ಕ್ರೀಡಾಕೂಟವನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಿ ವಿಜೇತ ಸ್ಪರ್ಧಾಳುಗಳು ಹಾಗೂ ತಂಡಗಳನ್ನು ಬಹಳಷ್ಟು ರಚನಾತ್ಮಕವಾಗಿ ರೂಪಿಸಿಕೊಂಡು ರಾಜ್ಯಮಟ್ಟದಲ್ಲಿ ಭಾಗವಹಿಸುವಂತಹ ಇವರ ಕ್ರಿಯಾತ್ಮಕ ವಿಚಾರಗಳು ಸಂಘದ ಕ್ರಿಯಾಶೀಲತೆಗೆ ಸಾಕ್ಷಿಯಾಗಿ ನಿಲ್ಲುತ್ತದೆ. ಕಳೆದ ಮೂರು ವರ್ಷಗಳಿಂದ ಸ್ಥಗಿತಗೊಂಡಿರುವ ಶಿಕ್ಷಕರ ವರ್ಗಾವಣೆ ತಕ್ಷಣ ಪ್ರಾರಂಭಿಸುವ, ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರಿಗೆ ಪ್ರತ್ಯೇಕ ವೇತನ ಶ್ರೇಣಿಯ ಕುರಿತು ಹಕ್ಕೊತ್ತಾಯವನ್ನು ಗಟ್ಟಿಧ್ವನಿಯಲ್ಲಿ ಸರಕಾರದ ಗಮನ ಸೆಳೆದಿದ್ದಾರೆ.

ಜಿಲ್ಲೆಯಲ್ಲಿ ಸಂಘವು ಸ್ವಂತ ನಿವೇಶನ, ಸುಸಜ್ಜಿತ ಸಮುದಾಯ ಭವನ ನಿರ್ಮಾಣ, ಸಂಘದ ಆವರಣದಲ್ಲಿ ಸಂಗೀತ ಕ್ಷೇತ್ರದ ದಿಗ್ಗಜರಾದ ಡಾ. ಪಂಡಿತ ಪುಟ್ಟರಾಜರವರ ಮೂರ್ತಿ ಹಾಗೂ ದೇವಸ್ಥಾನ ನಿರ್ಮಾಣದಲ್ಲಿ ಹಿಂದಿನ ಅಧ್ಯಕ್ಷರಾದ ಪ್ರೇಮನಾಥ ಜಿ.ಗರಗ ಹಾಗೂ ಅವರೆಲ್ಲ ಪದಾಧಿಕಾರಿಗಳ ಕಾರ್ಯದಲ್ಲಿ ಇವರ ಪರಿಶ್ರಮ ಸಹ ಅಷ್ಟೇ ಪ್ರಾಮುಖ್ಯವಾಗಿರುವುದನ್ನು ಇಲ್ಲಿ ಗಮನಿಸಬಹುದಾಗಿದೆ.

ಇವರ ಕ್ರಿಯಾಶೀಲ ವ್ಯಕ್ತಿತ್ವ ಅವಲೋಕಿಸಿದ ರಾಜ್ಯ ಸಂಘದ ಅಧ್ಯಕ್ಷರಾದ ಡಾ. ಷಡಾಕ್ಷರಿಯವರು ಗುಂಜೀಕರರನ್ನು 2019ರಲ್ಲಿ ಕೇಂದ್ರ ಸಂಘದ ಉಪಾಧ್ಯಕರನ್ನಾಗಿ, 2024ರಲ್ಲಿ ಹಿರಿಯ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿದರು. ಹೊಣೆಗಾರಿಕೆ, ಜವಾಬ್ದಾರಿ ನಿರ್ವಹಣೆ ಮೂಲಕ ಅವರ ಆಪ್ತ ಸಹವರ್ತಿಯಾದರು. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ರಾಜ್ಯದ ಘಟಕದ ಅಧ್ಯಕ್ಷರಾಗಿ ಪ್ರಾಮಾಣಿಕ ಸೇವೆ ಸಲ್ಲಿಸಿದ್ದಾರೆ. ತಮ್ಮೆಲ್ಲಾ ಸಾಧನೆಗಳು ಹಾಗೂ ಪ್ರಗತಿಯ ಕುರಿತು ಚರ್ಚಿಸುವ ಹೆಗಲಿಗೆ ಹೆಗಲು ಕೊಟ್ಟು ಸಹಕರಿಸುವವರನ್ನು ಸದಾ ಮುಕ್ತ ಕಂಠದಿಂದ ಅಭಿಮಾನಿಸುವ ಸ್ವಭಾವ ಇವರ ಹೃದಯ ವೈಶಾಲ್ಯತೆಗೊಂದು ನಿದರ್ಶನವಾಗಿದೆ.



**- ವಿಶ್ವನಾಥ ಯ.ಕಮ್ಮಾರ.**
ಅಧ್ಯಾಪಕರು, ಗದಗ.

# ಯುರೋಪ್ ರಾಷ್ಟ್ರಗಳಲ್ಲಿ ಪ್ರೊ. ಯಾಪಲಪರವಿ ಉಪನ್ಯಾಸ

**■ವಿಜಯಸಾಕ್ಷಿ ಸುದ್ದಿ, ಗದಗ**

ನಾಡಿನ ಹೆಸರಾಂತ ಸಾಹಿತಿ, ಬಸವತತ್ವ ಚಿಂತಕ ಹಾಗೂ ವಚನ ಟಿವಿಯ ಮುಖ್ಯಸ್ಥ ಪ್ರೊ. ಸಿದ್ದು ಯಾಪಲಪರವಿ ಅವರು ಮೇ 8ರಿಂದ ಇಪ್ಪತ್ತು ದಿನಗಳ ಕಾಲ ಇಂಗ್ಲೆಂಡ್, ಫ್ರಾನ್ಸ್, ಜರ್ಮನಿ, ಸ್ವಿಜಲ್ಯಾರ್ಂಡ್ ಹಾಗೂ ಇತರ ಎಂಟು ರಾಷ್ಟ್ರಗಳಲ್ಲಿ ಪ್ರವಾಸ ಮಾಡಲಿದ್ದರೆ. ಬೆಂಗಳೂರಿನ ರಾಷ್ಟ್ರೀಯ ಬಸವ ಪ್ರತಿಷ್ಠಾನ, ಪರಮಪೂಜ್ಯ ಡಾ. ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಆಯೋಜಿಸಿರುವ ಚಿಂತನ ಗೋಷ್ಠಿಯಲ್ಲಿ ಪ್ರಧಾನ ಉಪನ್ಯಾಸಕರಾಗಿ ಪಾಲ್ಗೊಂಡು 'ಜಗತ್ತಿನ ಮೊದಲ ಪಾರ್ಲಿಮೆಂಟ್ ಅನುಭವ ಮಂಟಪ ಹಾಗೂ ವಚನಗಳ ಜಾಗತಿಕ ಮೌಲ್ಯಗಳು' ಎಂಬ ವಿಷಯದ ಕುರಿತು ಮಾತನಾಡಲಿದ್ದಾರೆ.



ಹಿರಿಯ ಸಾಂಸ್ಕೃತಿಕ ಚಿಂತಕರಾದ ಡಾ. ಜಿ.ಬಿ. ಪಾಟೀಲ, ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಕಡ್ಲಿಕೊಪ್ಪ, ಜಿಲ್ಲಾ ಚಿತ್ರಕಲಾ ಶಿಕ್ಷಕರ ಸಂಘದ ಅಧ್ಯಕ್ಷ ವಿಜಯ ಕಿರೆಸೂರ, ಡಾ. ಜಿ.ಎಸ್. ಹಿರೇಮಠ ಸೇರಿದಂತೆ ಕಸಾಪ ಪದಾಧಿಕಾರಿಗಳು ಹಾಗೂ ಸಾಹಿತ್ಯಾಸಕ್ತರು ಪ್ರೊ. ಸಿದ್ದು ಯಾಪಲಪರವಿ ಅವರನ್ನು ಅಭಿನಂದಿಸಿದ್ದಾರೆ.

# ಸಕ್ಕರೆ ಕಾರ್ಖಾನೆಗಳಿಗೆ ಆರ್ಥಿಕ ನೆರವು

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯ ಸರ್ಕಾರವು ರಾಜ್ಯದ ಕೆಲ ಸಕ್ಕರೆ ಕಾರ್ಖಾನೆಗಳ ವಿಚಾರವಾಗಿ ಕೈಗಾರಿಕೆ ಹಾಗೂ ರೈತರಿಗೆ ಅನುಕೂಲಕರ ನಿರ್ಧಾರ ಕೈಗೊಂಡಿದೆ. ಸರ್ಕಾರ ಪ್ರಮುಖ ಯೋಜನೆ ರೂಪಿಸುವಂತೆ ಹಣಕಾಸು ಇಲಾಖೆಗೆ ಸೂಚನೆ ನೀಡಿದೆ ಎಂದು ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ಸೋಮವಾರ ಮಾಹಿತಿ ನೀಡಿದ್ದಾರೆ. ಸಹಕಾರಿ ಸಕ್ಕರೆ ಕಾರ್ಖಾನೆಗಳಿಗೆ ಒದಗಿಸಬೇಕಾದ ನೆರವು ಕುರಿತು ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಚೇರಿಯಲ್ಲಿ ಸೋಮವಾರ ನಡೆದ ಸಭೆಯಲ್ಲಿ ಭಾಗವಹಿಸಿದ ಅವರು, ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನಲ್ಲಿರುವ ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆ, ವಿಜಯಪುರ ಜಿಲ್ಲೆ ಬಬಲೇಶ್ವರ ತಾಲೂಕಿನ ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ಹಾಗೂ ಇಂಡಿ ತಾಲೂಕಿನ ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆಗಳಿಗೆ ಅಗತ್ಯವಿರುವ ಆರ್ಥಿಕ ನೆರವು ಹೇಗೆ ಒದಗಿಸಬೇಕು ಎನ್ನುವ ಬಗ್ಗೆ ಸರಿಯಾದ ಯೋಜನೆ ರೂಪಿಸುವಂತೆ ಮುಖ್ಯಮಂತ್ರಿಯವರು ಹಣಕಾಸು ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ ಎಂದರು.




# ಡಾ. ರವಿ ಎಲ್.ಗುಂಜೀಕರ ಅಭಿನಂದನಾ ಸಮಾರಂಭ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ರವಿ ಎಲ್.ಗುಂಜೀಕರ ಅಭಿಮಾನಿ ಬಳಗ ಗದಗ, ಕರ್ನಾಟಕ ರಾಜ್ಯ ಸರ್ಕಾರ ನೌಕರರ ಸಂಘ ಬೆಂಗಳೂರು ಜಿಲ್ಲಾ ಶಾಖೆ ಗದಗ ಹಾಗೂ ವಿವಿಧ ಇಲಾಖೆಗಳ ವೃಂದ ಸಂಘಗಳು ಮತ್ತು ವಿವಿಧ ಸಂಘಟನೆಗಳ ಸಹಯೋಗದಲ್ಲಿ ಮೇ. 6ರಂದು ಬೆಳಿಗ್ಗೆ 10.30ಕ್ಕೆ ಗದಗ ನಗರದ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಡಾ. ರವಿ ಎಲ್.ಗುಂಜೀಕರ ಅವರ ವಯೋನಿವೃತ್ತಿಯ ಅಭಿನಂದನಾ ಸಮಾರಂಭ 'ಸಾರ್ಥಕ ರವಿ ಸಂವತ್ಸರ' ಜರುಗಲಿದೆ. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಜಗದ್ಗುರು ಇಮ್ಮಡಿ ಸಿದ್ಧರಾಮೇಶ್ವರ ಮಹಾಸ್ವಾಮಿಗಳು ವಹಿಸುವರು. ಸಾನ್ನಿಧ್ಯವನ್ನು ನಂದಿವೇರಿ ಮಠದ ಶಿವಕುಮಾರ ಶ್ರೀಗಳು, ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು, ಅಡ್ನೂರು ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯರು, ಓಂಕಾರೇಶ್ವರ ಮಠದ ಪಕ್ಕೀರೇಶ್ವರ ಶಿವಾಚಾರ್ಯರು, ಡಾ.ಮಂಜುನಾಥ ಅಪ್ಪಾಜಿ ವಹಿಸುವರು.

ವಿ.ಪ ಸಭಾಪತಿ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸುವರು. ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ, ಕಾನೂನು, ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಉದ್ಘಾಟಿಸುವರು. ಅಭಿನಂದನಾ ಗ್ರಂಥವನ್ನು ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಬಿಡುಗಡೆ ಮಾಡುವರು. ವಿಶೇಷ ಸಾಧಕರಿಗೆ ಸನ್ಮಾನವನ್ನು ರೋಣ ಶಾಸಕ, ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ, ನರಗುಂದ ಶಾಸಕ, ಮಾಜಿ ಸಚಿವ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಸಿ.ಎನ್. ರವಿಕುಮಾರ ನೆರವೇರಿಸುವರು. ಇದೇ ಸಂದರ್ಭದಲ್ಲಿ 60 ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಅಪರೂಪದ ಸಾಧಕರಿಗೆ ಸನ್ಮಾನ ಜರುಗಲಿದೆ ಎಂದು ಡಾ. ರವಿ ಎಲ್.ಗುಂಜೀಕರ ಅಭಿಮಾನಿ ಬಳಗದ ಪ್ರಕಟಣೆ ತಿಳಿಸಿದೆ.

### ಶ್ರೀ ಗುರು ಕೊಟ್ಟೂರೇಶ್ವರಸ್ವಾಮಿ ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಭರದ ಸಿದ್ಧತೆ

# ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ನೂರಾರು ವರ್ಷಗಳ ಭವ್ಯ ಇತಿಹಾಸ ಹೊಂದಿರುವ ಶಿಗ್ಲಿ ಗ್ರಾಮದ ಶ್ರೀ ಗುರು ಕೊಟ್ಟೂರೇಶ್ವರಸ್ವಾಮಿ ದೇವಾಲಯದ ನೂತನ ಕಟ್ಟಡ ನಿರ್ಮಾಣವಾಗಿದ್ದು, ದೇವಸ್ಥಾನ ಲೋಕಾರ್ಪಣೆ, ಮೂರ್ತಿ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಕಾರ್ಯಕ್ರಮಗಳು ಮೇ .6ರಿಂದ 8ರವರೆಗೆ ಮೂರು ದಿನಗಳ ಕಾಲ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಶ್ರೀ ಗುರು ಕೊಟ್ಟೂರೇಶ್ವರ ವಿವಿಧೋದ್ದೇಶಗಳ ಸೇವಾ ಸಮಿತಿ ಅಧ್ಯಕ್ಷ ಮಹಾದೇವಪ್ಪ ಬೆಳವಿಗಿ ಹೇಳಿದರು.

ಅವರು ಸಮೀಪದ ಶಿಗ್ಲಿ ಗ್ರಾಮದ ಶ್ರೀ ಗುರು ಕೊಟ್ಟೂರೇಶ್ವರಸ್ವಾಮಿ ನೂತನ ದೇವಸ್ಥಾನ ಲೋಕಾರ್ಪಣೆ ಕುರಿತು ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಶ್ರೀ ಗುರು ಕೊಟ್ಟೂರೇಶ್ವರ ಸ್ವಾಮಿಗೆ ಇಲ್ಲಿನ ಭಕ್ತರು ಸುಮಾರು 2–3 ದಶಕಗಳಿಂದ ನಡೆಸಿಕೊಂಡು ಬರುತ್ತಿರುವ ಪಾದಯಾತ್ರೆಯಿಂದ ಭಕ್ತರು ಸೇರಿ ಇಲ್ಲಿನ ಕೊಟ್ಟೂರುಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯ ಕೈಗೊಂಡಿದ್ದು, ಸುಮಾರು 1.20 ಕೋಟಿ ರೂಗಳ ವೆಚ್ಚದಲ್ಲಿ ಭವ್ಯ ದೇವಸ್ಥಾನ ನಿರ್ಮಾಣ ಮಾಡಲಾಗಿದೆ. ಸರಕಾರದ ಅನುದಾನವಿಲ್ಲದೆ ಭಕ್ತರು ನೀಡಿದ ದೇಣಿಗೆಯಿಂದಲೇ ದೇವಸ್ಥಾನ ನಿರ್ಮಾಣ ಮಾಡಲಾಗಿರುವದು ವಿಶೇಷವಾಗಿದೆ.

ಸಂಘಟಕರಾದ ರಾಜು ಓಲೇಕಾರ, ರಾಮಣ್ಣ ಲಮಾಣಿ (ಶಿಗ್ಲಿ) ಮಾತನಾಡಿ, ಮೇ. 6ರಿಂದ 8ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಧರ್ಮ ಸಭೆ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮೇ. 6ರಂದು ಪುರಾಣ ಮಂಗಲ ಕಾರ್ಯಕ್ರಮ ನೆರವೇರಲಿದೆ. ಮೇ. 7ರಂದು ಜನಜಾಗೃತಿ ಸಮಾರಂಭ, 8ರಂದು ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ, ನಂತರ ಮಧ್ಯಾಹ್ನ 11 ಗಂಟೆಗೆ ಧರ್ಮ ಸಭೆ ನಡೆಯಲಿದೆ. ಈ ಕಾರ್ಯಕ್ರಮಗಳಲ್ಲಿ ಅನೇಕ ಮಠಾಧೀಶರು, ಸಚಿವರು, ಶಾಸಕರು, ಮಾಜಿ ಸಚಿವರು, ಮಾಜಿ ಶಾಸಕರು ಸೇರಿದಂತೆ ಮುಖಂಡರು ಆಗಮಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಗ್ರಾಮದ ಎಲ್ಲ ಸಂಘ–ಸಂಸ್ಥೆಗಳು ಸಹಯೋಗ ನೀಡಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಾಗಪ್ಪ ತಂಬ್ರಳ್ಳಿ, ನಾಗರಾಜ ಬೆಳವಿಗಿ, ಮಂಜುನಾಥ ಗುಂಡಮಿ, ಶಿವಯೋಗಿ ಹಿರೇಮಠ, ಶಿವಯ್ಯ ಪೂಜಾರ, ಮಂಜುನಾಥ ಬೀಳಗಿ, ರಾಘವೇಂದ್ರ ಅಸುಂಡಿ, ಮಹಾಂತೇಶ ಅಸುಂಡಿ, ಕಲ್ಲಯ್ಯ ಪೂಜಾರ, ಶಿವಯ್ಯ ಪೂಜಾರ, ಭೀಮಸಿ ವಾಲಿಕಾರ, ಗಂಗಾಧರಯ್ಯ ರಿತ್ತಿಮಠ, ಶಿದ್ರಾಮಸ್ವಾಮಿ ಪೂಜಾರ, ಸೋಮು ಗುಂಡಮಿ, ಆನಂದ ಹೊಸಳ್ಳಿ, ಬಸವರಾಜ ಬೆಳವಗಿ, ಬಸವರಾಜ ಹಂಗನಕಟ್ಟಿ, ಬಸವರಾಜ ಗುಡಗೇರಿ ಸೇರಿದಂತೆ ಅನೇಕರಿದ್ದರು.



ದೇವಸ್ಥಾನ ಲೋಕಾರ್ಪಣೆ ಮತ್ತು ಮೂರ್ತಿ ಪ್ರತಿಷ್ಠಾಪನೆ ಕಾರ್ಯವನ್ನು ಅದ್ದೂರಿಯಾಗಿ ನೆರವೇರಿಸುವ ನಿಟ್ಟಿನಲ್ಲಿ ಇಲ್ಲಿನ ಯುವಕರ ಪಡೆ ಅವಿರತವಾಗಿ ಶ್ರಮಿಸುತ್ತಿದೆ. ಕಳೆದ ಮಾರ್ಚ್ 28ರಿಂದ ಇದೇ ಮೇ.6ರವರೆಗೆ ಹೂವಿನ ಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳ ಅಮೃತವಾಣಿಯಿಂದ ಶ್ರೀ ಗುರು ಕೊಟ್ಟೂರು ಬಸವೇಶ್ವರ ಸ್ವಾಮಿಯ ಪುರಾಣ ಪ್ರವಚನ ಸಂಜೆ 7ರಿಂದ ನಡೆಯುತ್ತಿದ್ದು, ನಿತ್ಯ ಸಾವಿರಾರು ಜನರು ಪ್ರವಚನಕ್ಕೆ ಸೇರುತ್ತಿದ್ದಾರೆ. ಎಲ್ಲ ಕಾರ್ಯಕ್ರಮಗಳನ್ನು ಅದ್ದೂರಿಯಾಗಿ ನಡೆಸಲು ಕಮಿಟಿಯವರು ನಿರ್ಧರಿಸಿದ್ದು, ಸುಮಾರು 10–15 ಸಾವಿರ ಜನರು ಸೇರುವ ನಿರೀಕ್ಷೆಯಿದೆ ಎಂದು ಮಹಾದೇವಪ್ಪ ಬೆಳವಿಗಿ ತಿಳಿಸಿದರು.

# ಪಂಚಾಚಾರ್ಯರ ಸಮಾವೇಶ ನಾಳೆ



■ವಿಜಯಸಾಕ್ಷಿ ಸುದ್ದಿ, ಕಲಬುರ್ಗಿ

ಮುಂಬರುವ ಜನಗಣತಿ–ಜಾತಿಗಣತಿ ಸಂದರ್ಭದಲ್ಲಿ ಪಂಚ ಪೀಠಗಳ ನಿಲುವನ್ನು ಸ್ಪಷ್ಟಪಡಿಸುವ ಉದ್ದೇಶದಿಂದ ಮೇ. 7ರ ಸಂಜೆ 7 ಗಂಟೆಗೆ ಮುಕ್ತಿಮಂದಿರ ಕ್ಷೇತ್ರದಲ್ಲಿ ಪಂಚ ಪೀಠಾಧೀಶರ ಸಮಾವೇಶ ನಡೆಯಲಿದ್ದು, ಶ್ರೀ ಉಜ್ಜಯಿನಿ, ಶ್ರೀ ಕೇದಾರ, ಶ್ರೀ ಶ್ರೀಶೈಲ ಮತ್ತು ಶ್ರೀ ಕಾಶಿ ಜಗದ್ಗುರುಗಳವರಿಗೆ ಈ ಸಭೆಯಲ್ಲಿ ಪಾಲ್ಗೊಳ್ಳುವಂತೆ ವಿನಂತಿಸಲಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಿಳಿಸಿದ್ದಾರೆ.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾದ ಡಾ.ಶಾಮನೂರು ಶಿವಶಂಕರಪ್ಪನವರು ಜನಗಣತಿ–ಜಾತಿಗಣತಿ ಸಂದಿಗ್ಧ ಪ್ರಸಂಗದಲ್ಲಿ ಪೀಠಗಳು ಒಕ್ಕೂಟ ವ್ಯವಸ್ಥೆಗೆ ಮುಂದಾಗಬೇಕೆಂದು ಅಪೇಕ್ಷೆ ವ್ಯಕ್ತಪಡಿಸಿದ್ದರ ಹಿನ್ನೆಲೆಯಲ್ಲಿ ಮತ್ತು ಪೀಠಾಭಿಮಾನಿಗಳ–ಭಕ್ತರ ಒತ್ತಾಸೆಯ ಮೇರೆಗೆ ಈ ಸಭೆಯನ್ನು ಕರೆಯಲಾಗಿದೆ. ಆಂತರಿಕ ಸಮಸ್ಯೆಗಳಿಗೆ ತಾರ್ಕಿಕವಾಗಿ ಅಂತ್ಯಗೊಳಿಸುವ ವಿಚಾರವನ್ನು ಈ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಿಳಿಸಿದ್ದಾರೆ.

# ವಡವಿ ಮೊರಾರ್ಜಿ ವಸತಿ ಶಾಲೆಯ ಫಲಿತಾಂಶ ಶೇ 100





■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ ತಾಲೂಕಿನ ವಡವಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಶೇ.100ರಷ್ಟಾಗಿದೆ. ಪರೀಕ್ಷೆಗೆ ಕುಳಿತ 38 ವಿದ್ಯಾರ್ಥಿಗಳಲ್ಲಿ 13 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 20 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಪಾಸಾಗಿದ್ದಾರೆ. ವಿದ್ಯಾರ್ಥಿಗಳಾದ ನವೀನ ಮಾದರ ಶೇ. 96.32 ಅಂಕ ಪಡೆದು ಶಾಲೆಗೆ ಪ್ರಥಮ, ಮುಜಾಮಿಲ್ ಲಾಡಸಾಬನವರ ಶೇ. 96 ಅಂಕಗಳೊಂದಿಗೆ ದ್ವಿತೀಯ ಮತ್ತು ಮಂಜುನಾಥ ಲಮಾಣಿ ಶೇ. 94. ಅಂಕಗಳನ್ನು ಪಡೆದಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಅಧಿಕಾರಿ ವರ್ಗ, ಶಿಕ್ಷಕ ವೃಂದ ಮತ್ತು ಪಾಲಕರು ಹರ್ಷ ವ್ಯಕ್ತಪಡಿಸಿದ್ದಾರೆ.

# ಅಡವೀಂದ್ರ ಮಠದಲ್ಲಿ ಶಿವಾನುಭವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಡವೀಂದ್ರಸ್ವಾಮಿ ಮಠದಲ್ಲಿ ಮೇ. 6ರಂದು ಸಂಜೆ 6.30 ಗಂಟೆಗೆ 335ನೇ ಮಾಸಿಕ ಶಿವಾನುಭವ ಹಾಗೂ ಬಸವ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಶ್ರೀಮಠದ ಧರ್ಮದರ್ಶಿ ವೇ.ಮೂ. ಮಹೇಶ್ವರ ಸ್ವಾಮಿಗಳು ಸಮ್ಮುಖ ವಹಿಸುವರು. ಅಧ್ಯಕ್ಷತೆಯನ್ನು ಶಿವಾನುಭವ ಸಮಿತಿಯ ಅಧ್ಯಕ್ಷ ಡಾ. ಎಸ್.ಕೆ.ನಾಲತ್ವಾಡಮಠ ವಹಿಸುವರು. ಸಾಹಿತಿ ಟಿ.ವ್ಹಿ. ಮಾಗಳದ ಬಸವ ಸಂದೇಶ ವಿಷಯವಾಗಿ ಉಪನ್ಯಾಸ ನೀಡುವರು. ಮುಖ್ಯ ಅತಿಥಿಯಾಗಿ ಉಮೇಶಗೌಡ ಪಾಟೀಲ ಆಗಮಿಸುವರು. ಇದೇ ಸಂದರ್ಭದಲ್ಲಿ ಕಾಶ್ಮೀರ ಪಹಲ್ಗಾಮ ದಾಳಿಯಲ್ಲಿ ಮೃತರಾದವರಿಗೆ, ಇತ್ತೀಚೆಗೆ ನಿಧನರಾದ ಮಹಾದೇವಯ್ಯ ಧನ್ನೂರಹಿರೇಮಠ ಹಾಗೂ ಮಂಜುನಾಥ ಬಡಿಗೇರ ಅವರಿಗೆ ಶೃದ್ಧಾಂಜಲಿ ಸಲ್ಲಿಸಲಾಗುವದು. ಭಕ್ತಿ ಸೇವೆಯನ್ನು ಆನಂದ ಹಿರೇಮಠ, ಸೀಮಾ ಹಾಗರಗಿ ವಹಿಸಿಕೊಂಡಿದ್ದು, ಶಿವಾನುಭವ ಸಮಿತಿಯ ಪ್ರಧಾನ ಕಾರ್ಯದರ್ಶಿ ಬಿ.ಬಿ. ತೋಟಗೇರ ಸರ್ವರಿಗೂ ಸ್ವಾಗತ ಕೋರಿದ್ದಾರೆ.


### ರವಿ ಗುಂಜೀಕರ ನಿವೃತ್ತಿ ನಿಮಿತ್ತ ಜಿಲ್ಲಾಸ್ಪತ್ರೆಯ ರೋಗಿಗಳಿಗೆ ಹಣ್ಣು-ಹಂಪಲು ವಿತರಣೆ

# ಅಸಹಾಯಕರ ಸೇವೆ ಗುಂಜೀಕರರ ಜಾಯಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಸೇವೆಯಲ್ಲಿ ಇರುವಷ್ಟು ದಿನ ನೊಂದವರ–ಬಡವರ ಶ್ರೇಯೋಭಿವೃದ್ಧಿಗಾಗಿ ಸೇವೆ ಸಲ್ಲಿಸಿದ ರವಿ ಗುಂಜೀಕರರು ನಿವೃತ್ತಿ ನಂತರವೂ ತಮ್ಮ ಸೇವಾಕಾರ್ಯ ಮುಂದುವರೆಸಿದ್ದು, ಅಸಹಾಯಕರಿಗೆ ಸೇವೆ ಸಲ್ಲಿಸುವುದು ರವಿ ಗುಂಜೀಕರರ ಜಾಯಮಾನವಾಗಿದೆ ಎಂದು ರವಿ ಗುಂಜೀಕರ ಅಭಿಮಾನಿ ಬಳಗದ ಉಪಾಧ್ಯಕ್ಷ ಡಾ. ಎಸ್.ಆರ್. ಹಿರೇಮಠ ನುಡಿದರು.

ಅವರು ನಗರದ ಕೆ.ಎಚ್. ಪಾಟೀಲ ಜಿಲ್ಲಾಸ್ಪತ್ರೆ (ಜಿಮ್ಸ್)ಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮಾಜಿ ಜಿಲ್ಲಾಧಿಕಾರಿಗಳು ಹಾಗೂ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಜಿಲ್ಲಾಧ್ಯಕ್ಷ ರವಿ ಎಲ್.ಗುಂಜೀಕರ ಅವರ ನಿವೃತ್ತಿ ಅಂಗವಾಗಿ ರೋಗಿಗಳಿಗೆ ಹಣ್ಣು–ಹಂಪಲುಗಳುಳ್ಳ ಪೋಷಕಾಂಶಯುಕ್ತ ಆಹಾರದ ಕಿಟ್ ವಿತರಣೆ ಸಂದರ್ಭದಲ್ಲಿ ಮಾತನಾಡಿದರು.



ರಕ್ತದಾನ, ಮಹಿಳಾ ದಿನಾಚರಣೆ, ಸಸಿ ನೆಡುವ ಕಾರ್ಯಕ್ರಮ ಸೇರಿದಂತೆ ಇಂದು ರೋಗಿಗಳಿಗೆ ಹಣ್ಣು–ಹಂಪಲು ವಿತರಣೆ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಸಮಾಜಕ್ಕೆ ಸೇವೆ ಸಲ್ಲಿಸುವ ಪ್ರವೃತ್ತಿ ಕೇವಲ ವೃತ್ತಿ–ಅಧಿಕಾರಕ್ಕೆ ಸೀಮಿತವಲ್ಲ ಎನ್ನುವುದನ್ನು ರವಿ ಗುಂಜೀಕರ ನಿರೂಪಿಸಿದ್ದಾರೆ ಎಂದರು.

ರವಿ ಗುಂಜೀಕರ ಹಾಗೂ ಅವರ ಅಭಿಮಾನಿ ಬಳಗದ ಸದಸ್ಯರು ನೂರಾರು ರೋಗಿಗಳಿಗೆ ಹಣ್ಣು–ಹಂಪಲಿನ ಕಿಟ್ ವಿತರಿಸಿದರು, ಈ ಸಂದರ್ಭದಲ್ಲಿ ಗುಂಜೀಕರ ಅವರು ರೋಗಿಗಳ ಆರೋಗ್ಯ ಆಲಿಸಿ ಸಾಂತ್ವನ ಹೇಳಿದರು. ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಬಸವರಾಜ ಬಳ್ಳಾರಿ, ರವಿ ಗುಂಜೀಕರ ಅಭಿಮಾನಿ ಬಳಗದ ಅಧ್ಯಕ್ಷ ಅರುಣಕುಮಾರ ಚವ್ಹಾಣ, ಕಾರ್ಯದರ್ಶಿ ಕೆ.ಎಫ್. ಹಳ್ಯಾಳ, ಆರ್.ಎಂ. ನಿಂಬನಾಯ್ಕರ, ಮಂಜು ಮಾನೆ, ಶಿವಾಜಿ ಪಾವನ, ರೇಡಿಯಾಲಜಿಸ್ಟ್ ಲಕ್ಷ್ಮಣ ಮುದುಡಿ, ನಾಗೇಂದ್ರ ಯಳಮಲಿ ಮುಂತಾದವರಿದ್ದರು.

### ಹೆಸರು ಬೀಜ ಬಿತ್ತನೆಗೆ ಜಂಟಿ ಕೃಷಿ ನಿರ್ದೇಶಕರ ಸಲಹೆ

# ಬೇಸಾಯಕ್ಕೆ ಮುನ್ನ ಮಣ್ಣಿನ ಪರೀಕ್ಷೆ ಮಾಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ 5.05.2025ರವರೆಗೆ ಪೂರ್ವ ಮುಂಗಾರು ವಾಡಿಕೆಯಾಗಿ 47.00ಮಿ.ಮೀ. ಮಳೆ ಆಗಬೇಕಿದ್ದು, 67.80ಮಿ.ಮೀ. (ಶೇ.44ರಷ್ಟು) ಹೆಚ್ಚು ಮಳೆಯಾಗಿದೆ. ಬೇಸಾಯವನ್ನು ಕೈಗೊಳ್ಳುವ ಮುಂಚಿತವಾಗಿ, ರೈತರು ತಮ್ಮ ಕ್ಷೇತ್ರದ ಮಣ್ಣಿನ ಪರೀಕ್ಷೆಯನ್ನು ಮಾಡಿಸಿ, ವಿಶ್ಲೇಷಣೆಯ ಫಲಿತಾಂಶಕ್ಕನುಗುಣವಾಗಿ ಹಾಗೂ ಬೆಳೆಯ ಬೇಡಿಕೆಗನುಗುಣವಾಗಿ ಪೋಷಕಾಂಶಗಳನ್ನು ಬೆಳೆಗಳಿಗೆ ಕೊಡಬೇಕು. ಜಿಲ್ಲೆಯಲ್ಲಿ, ರೈತ ಬಾಂಧವರು ಪೂರ್ವ ಮುಂಗಾರಿನಲ್ಲಿ ಅತಿ ಹೆಚ್ಚು ಪ್ರದೇಶದಲ್ಲಿ ಬೆಳೆಯಲಾಗುವ ಹೆಸರು ಬೆಳೆಯನ್ನು ಬಿತ್ತಲು ಭೂಮಿಯನ್ನು ತಯಾರಿಸಿಕೊಳ್ಳಬೇಕು.

ಹೆಸರು ಬಿತ್ತನೆಗೆ 2ರಿಂದ 3 ವಾರ ಮುಂಚಿತವಾಗಿ ಎಕರೆಗೆ 2 ಟನ್ ಕೊಟ್ಟಿಗೆ ಗೊಬ್ಬರವನ್ನು ಭೂಮಿಗೆ ಸೇರಿಸಬೇಕು. ಕೊಟ್ಟಿಗೆ ಗೊಬ್ಬರದೊಂದಿಗೆ ಪ್ರತಿ ಎಕರೆಗೆ 4 ಕಿ.ಗ್ರಾಂ. ಸತುವಿನ ಸಲ್ಫೇಟ್‌ನ್ನು ಬಳಸುವುದರಿಂದ ಅಧಿಕ ಇಳುವರಿಯನ್ನು ಪಡೆಯಬಹುದು. ಬಿತ್ತುವ ಮುಂಚೆ ಪ್ರತಿ ಎಕರೆಗೆ ಬೇಕಾಗುವ ಬೀಜಕ್ಕೆ ರೈಜೋಬಿಯಂ 200 ಗ್ರಾಂ. ಹಾಗೂ ರಂಜಕ ಕರಗಿಸುವ ಜೈವಿಕ ಗೊಬ್ಬರ 500 ಗ್ರಾಂ.ಗಳಿಂದ ಬೀಜೋಪಚಾರ ಮಾಡಬೇಕು. ಇದರಿಂದ ರಾಸಾಯನಿಕ ಗೊಬ್ಬರದ ಮೇಲಿನ ಖರ್ಚನ್ನು ಕಡಿಮೆ ಮಾಡಬಹುದು. ಮುಂಚಿತವಾಗಿ ಬಿತ್ತಿದ ಬೆಳೆಯಿಂದ ಹೆಚ್ಚು ಇಳುವರಿ ಪಡೆಯಬಹುದು. ಬಿ.ಜಿ.ಎಸ್–9 ಹೆಸರಿನ ತಳಿಯು ರಾಯಚೂರಿನ ಕೃಷಿ ವಿಶ್ವ ವಿದ್ಯಾಲಯದಿಂದ ಬಿಡುಗಡೆಯಾದ ಮಳೆಯಾಶ್ರಿತ ಸುಧಾರಿತ ತಳಿ, ಬೂದು ರೋಗಕ್ಕೆ ತಕ್ಕ ಮಟ್ಟಿಗೆ ನಿರೋಧಕತೆ ಇದೆ. ಡಿ.ಜಿ.ಜಿ.ವಿ–2 ತಳಿಯನ್ನು ಕೂಡ ಜಿಲ್ಲೆಯಲ್ಲಿ ವ್ಯಾಪಕವಾಗಿ ಬೆಳೆಯಲಾಗುತ್ತಿದೆ. ಸದರಿ ತಳಿಗಳ ಬೀಜಗಳನ್ನು ಕೃಷಿ ಇಲಾಖೆಯಿಂದ ಸಹಾಯಧನದಲ್ಲಿ ಪೂರೈಸಲಾಗುತ್ತದೆ.

ಬಿತ್ತಿದ ದಿನ ಅಥವಾ ಮರುದಿನ ಪ್ರತಿ ಎಕರೆಗೆ 1.3 ಲೀಟರ್ ಪೆಂಡಿಮಿಥಲಿನ್ 30 ಇ.ಸಿ. ಕಳೆನಾಶಕವನ್ನು 300 ಲೀ. ನೀರಿನಲ್ಲಿ ಬೆರೆಸಿ ಮಣ್ಣಿನ ಮೇಲೆ ಸಿಂಪಡಿಸಿ, 30 ದಿನಗಳ ನಂತರ ಒಂದು ಸಲ ಅಂತರ ಬೇಸಾಯ ಮಾಡಿ ಕಳೆಗಳನ್ನು ನಿಯಂತ್ರಿಸಬಹುದು. ಕಳೆನಾಶಕವನ್ನು ಸಿಂಪರಣೆ ಮಾಡುವಾಗ ಮಣ್ಣಿನಲ್ಲಿ ಸಾಕಷ್ಟು ತೇವಾಂಶ ಇರಬೇಕು.

ಸಸ್ಯ ಸಂರಕ್ಷಣಾ ಕ್ರಮಗಳನ್ನು ಕೀಟ ಮತ್ತು ರೋಗ ಬಾಧೆ ಕಂಡಾಗ ಮಾತ್ರ ತೆಗೆದುಕೊಳ್ಳಬೇಕು. ಪ್ರತಿ ವರ್ಷ ಕೀಟ ಮತ್ತು ರೋಗ ಬಾಧೆ ಇರುವ ಕ್ಷೇತ್ರಗಳಲ್ಲಿ ಮುಂಜಾಗ್ರತಾ ಕ್ರಮವಾಗಿ ಸಸ್ಯ ಸಂರಕ್ಷಣಾ ಕ್ರಮಗಳನ್ನು ಕೈಗೊಳ್ಳಬೇಕು. ಕೀಟ ಮತ್ತು ರೋಗ ಹತೋಟಿಗೆ ಪ್ರತಿ ಎಕರೆಗೆ 200 ಲೀ. ಸಿಂಪರಣಾ ದ್ರಾವಣ ಬಳಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.



ಶೇ. 2ರ ಕ್ಯಾಲ್ಸಿಯಂ ಕ್ಲೋರೈಡ್‌ನಲ್ಲಿ ಬೀಜಗಳನ್ನು ಒಂದು ಗಂಟೆ ನೆನೆಸಿ 7–8 ಗಂಟೆಗಳವರೆಗೆ ನೆರಳಿನಲ್ಲಿ ಒಣಗಿಸುವುದರಿಂದ ಬರ ನಿರೋಧಕತೆಯನ್ನು ಹೆಚ್ಚಿಸಬಹುದು. ಇಳುವರಿ ಹೆಚ್ಚಿಸಲು ಪ್ರತಿ ಲೀಟರ್ ನೀರಿಗೆ 10 ಗ್ರಾಂ ಪಲ್ಸ್ ಮ್ಯಾಜಿಕ್ ಬೆರೆಸಿ ಬೆಳೆಯು ಶೇ. 50ರಷ್ಟು ಹೂವಾಡುವ ಹಂತದಲ್ಲಿ ಸಿಂಪಡಿಸಬೇಕು.

### ತೋಂಟದಾರ್ಯ ಮಠದ ರಥ ಬೀದಿಯಲ್ಲಿ ಅನ್ಯ ಧರ್ಮ, ರಾಜ್ಯದ ವ್ಯಾಪಾರಸ್ಥರನ್ನು ನಿರ್ಬಂಧಿಸಲು ಒತ್ತಾಯ

# ಮೇ 10ರಿಂದ ಅನಿರ್ದಿಷ್ಟಾವಧಿ ಧರಣಿ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಉತ್ತರ ಕರ್ನಾಟಕದ, ಅದರಲ್ಲೂ ಗದಗ ಜಿಲ್ಲೆಯಲ್ಲಿ ಕೈಗಾರಿಕೆಗಳು ಹಾಗೂ ಫ್ಯಾಕ್ಟರಿಗಳು ಇಲ್ಲದಿರುವ ಕಾರಣ ಸ್ಥಳೀಯರು, ಯುವಕರು ಉದ್ಯೋಗವನ್ನು ಅರಸಿಕೊಂಡು ಬೆಂಗಳೂರು, ಮುಂಬಯಿ, ಪುಣೆ ಇತ್ಯಾದಿ ಮಹಾನಗರಗಳತ್ತ ಮುಖ ಮಾಡುತ್ತಿದ್ದಾರೆ. ನಮ್ಮ ಜನರು ತುತ್ತಿನ ಚೀಲ ತುಂಬಿಕೊಳ್ಳಲು ಜಾತ್ರೆ, ಉತ್ಸವ, ಸಂತೆಗಳ ಮೇಲೆ ಅವಲಂಬಿತರಾಗಿದ್ದಾರೆ. ಮೊಬೈಲ್ ಕವರ್, ಪಾದರಕ್ಷೆ, ಮಕ್ಕಳ ಬಟ್ಟೆ ಹಾಗೂ ವಿವಿಧ ದಿನೋಪಯೋಗಿ ವಸ್ತುಗಳನ್ನು ಮಾರಾಟ ಮಾಡುತ್ತ ಜೀವನವನ್ನು ಸಾಗಿಸುತ್ತಿದ್ದಾರೆ.

ಆದರೆ, ಗದಗ ತೆ–ೂಂಟದಾರ್ಯ ಮಠದ ರಥ ಬೀದಿಯಲ್ಲಿ 40ರಿಂದ 60 ದಿನಗಳ ಕಾಲ ಅನ್ಯ ರಾಜ್ಯದ ವ್ಯಾಪಾರಸ್ಥರು ಬಂದು ಸಾರ್ವಜನಿಕರ ರಸ್ತೆಯಲ್ಲಿ ಅನಧಿಕೃತ ಹಾಗೂ ತಾತ್ಕಾಲಿಕವಾಗಿ ಅಂಗಡಿಗಳನ್ನು ನಿರ್ಮಾಣ ಮಾಡಿ ವ್ಯವಹರಿಸಿ ನಮ್ಮವರ ಹೊಟ್ಟೆ ಮೇಲೆ ಕಲ್ಲು ಹಾಕುತ್ತಿರುವುದು ಖಂಡನೀಯ. ನಮ್ಮ ನೆಲ–ಜಲ–ಭಾಷೆ ವಿರೋಧಿಸುತ್ತಿರುವ ಅನ್ಯ ಧರ್ಮದ ಹಾಗೂ ಅನ್ಯ ರಾಜ್ಯದ ವ್ಯಾಪಾರಸ್ಥರಿಗೆ ವ್ಯಾಪಾರ ವಹಿವಾಟು ನಡೆಸಲು ಗದಗ–ಬೆಟಗೇರಿ ನಗರ ಸಭೆ ಅವಕಾಶ ನೀಡುತ್ತಿದೆ.

ಮಾರಾಟ ಮಳಿಗೆಗಳಿಂದ ನಗರಸಭೆಗೆ ಹಾಗೂ ಸರ್ಕಾರಕ್ಕೆ ಯಾವುದೇ ರೀತಿಯ ತೆರಿಗೆ ಸಂಗ್ರಹಣೆ ಆಗದೆ ಅವರು ಬಿಸಾಡುತ್ತಿರುವ ಕಸದಿಂದ ಪೌರಕಾರ್ಮಿಕರಿಗೆ ಪ್ರತಿ ನಿತ್ಯ ಹೆಚ್ಚುವರಿ ಕೆಲಸವಾಗಿದೆ. ಜೊತೆಗೆ ರಾಸಾಯನಿಕ ಬಣ್ಣ ಹಾಗೂ ಹಾನಿಕಾರಕ ವಸ್ತುಗಳನ್ನು ಬಳಸಿ ಆಹಾರವನ್ನು ತಯಾರಿಸಿ ನೀಡುತ್ತಿರುವುದರಿಂದ ಜನರ ಆರೋಗ್ಯ ಮೇಲೆ ಕೆಟ್ಟ ಪರಿಣಾಮ ಬೀರುತ್ತಿರುವುದನ್ನು ಮನಗಂಡು, ಸ್ಥಳೀಯರ ಹಾಗೂ ಬೀದಿ ಬದಿ ವ್ಯಾಪಾರಸ್ಥರ ಉದ್ಯೋಗಕ್ಕೆ ಬೆನ್ನೆಲುಬಾಗಿ ನಿಲ್ಲಲು ಹಾಗೂ ಆ ರಸ್ತೆಯಲ್ಲಿ ಸಂಚಾರ ವ್ಯವಸ್ಥೆಯನ್ನು ಸುಲಭಗೊಳಿಸಿ ಸಾರ್ವಜನಿಕರಿಗೆ ಹಾಗೂ ದ್ವಿಚಕ್ರ ಸವಾರರ ಅನುಕೂಲಕ್ಕಾಗಿ ಆಗ್ರಹಿಸಿ ಮೇ. 10ರಿಂದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಶ್ರೀರಾಮ ಸೇನಾ ಮತ್ತು ವಿವಿಧ ದಲಿತ, ಕನ್ನಡ ಹಾಗೂ ಹಿಂದೂ ಪರ ಸಂಘಟನೆಗಳ ಸಹಕಾರದೊಂದಿಗೆ ಅನಿರ್ದಿಷ್ಟಾವಧಿ ಧರಣಿ ನಡೆಸಲಾಗುವುದೆಂದು ಶ್ರೀರಾಮ ಸೇನಾ ಗದಗ ನಗರ ಘಟಕದ ಪ್ರಧಾನ ಕಾರ್ಯದರ್ಶಿ ಕುಮಾರ ಮಿಟ್ಟಿಮಠ ಪತ್ರಿಕಾ ಪ್ರಕಟಣೆ ಮೂಲಕ ತಿಳಿದ್ದಾರೆ.



# ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಫಲಿತಾಂಶ





■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಕನಕದಾಸ ಶಿಕ್ಷಣ ಸಮಿತಿಯ 2024/25ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಶಾಲಾ ಫಲಿತಾಂಶ ಶೇ. 64 ಆಗಿದೆ. ಸಾಯಿರಾಬಾನು ಅಜಂಖಾನವರ 546 ಅಂಕ ಪಡೆದು ಪ್ರಥಮ, ಮಹಮ್ಮದಹಾಸೀಮ ಸಂಬೂರ 531 ಅಂಕಗಳೊಂದಿಗೆ ದ್ವಿತೀಯ ಹಾಗೂ ಪ್ರಿಯಾ ಗಿರಿಯಮ್ಮನವರ 478 ಅಂಕ ಪಡೆದು ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಸಂಸ್ಥೆಗೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಶಾಲಾ ಪ್ರಧಾನ ಗುರುಗಳು ಹಾಗೂ ಶಿಕ್ಷಕ ವೃಂದದವರು ಅಭಿನಂದಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಸಾಧನೆ

■ವಿಜಯಸಾಕ್ಷಿ ಸುದ್ದಿ, ಡಂಬಳ



ಗ್ರಾಮದ ಮುಂಡರಗಿ ತಾಲೂಕಿನ ಮಹಮ್ಮದರಫೀಕ ತಾಂಬೋಟಿ ಅವರ ಪುತ್ರಿ ಸುಹಾನಾ ಮಹಮ್ಮದರಫೀಕ ತಾಂಬೋಟಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 607 ಅಂಕ (ಶೇ. 97.12) ಪಡೆಯುವ ಮೂಲಕ ಉತ್ತಮ ಸಾಧನೆ ಮಾಡಿ, ಗದಗ ಮಲ್ಲಸಮುದ್ರ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ಬಾಲಕಿಯರ ವಸತಿ ಶಾಲೆಗೆ ಹಾಗೂ ಗ್ರಾಮಕ್ಕೆ ಕೀರ್ತಿ ತಂದಿದ್ದಾಳೆ. ವಿದ್ಯಾರ್ಥಿನಿಗೆ ಅಂಜುಮನ್ ಸಮಿತಿ, ಗ್ರಾಮದ ಹಿರಿಯರು, ಶಿಕ್ಷಣ ಪ್ರೇಮಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ನಿಧನ

### ಲಕ್ಷ್ಮವ್ವ ಎಂ.ಛಬ್ಬಿ



ಮುಳಗುಂದ: ಪಟ್ಟಣದ ಸಿದ್ದೇಶ್ವರ ನಗರದ ನಿವಾಸಿ ಲಕ್ಷ್ಮವ್ವ ಎಂ.ಛಬ್ಬಿ (50) ಸೋಮವಾರ ನಿಧನರಾಗಿದ್ದಾರೆ. ಮೃತರು ಪತಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು–ಬಳಗ ಅಗಲಿದ್ದಾರೆ.

# ಚಾಲನಾ ವೃತ್ತಿ ಪರೀಕ್ಷೆಯ ಮಾಹಿತಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಸಂಖ್ಯೆ :01/2019 ದಿನಾಂಕ:10/12/2019ರನ್ವಯ ಅರ್ಹರಾದ ಅಭ್ಯರ್ಥಿಗಳಿಗೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹುಮನಾಬಾದ ಹಾಗೂ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹುಬ್ಬಳ್ಳಿ ಚಾಲನಾ ಪಥಗಳಲ್ಲಿ ಚಾಲನಾ ವೃತ್ತಿ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ಸದರಿ ಪರೀಕ್ಷೆಯು 10–05–2025ರವರೆಗೆ ನಡೆಯುತ್ತದೆ.

ಸದರಿ ಚಾಲನಾ ವೃತ್ತಿ ಪರೀಕ್ಷೆಗೆ ಗೈರು ಹಾಜರಾದ ಅಭ್ಯರ್ಥಿಗಳಿಗೆ 05–05–2025ರಿಂದ 10–05–2025ರವರೆಗೆ ಗೈರು ಹಾಜರಾದ ಅಭ್ಯರ್ಥಿಗಳನ್ನು ಒಳಗೊಂಡಂತೆ) 12–05–2025ರಿಂದ 24–05–2025ರವರೆಗೆ ಚಾಲನಾ ವೃತ್ತಿ ಪರೀಕ್ಷೆಗೆ ಹಾಜರಾಗಲು ಅವಕಾಶ ನೀಡಲಾಗುತ್ತಿದೆ. ಈ ಕುರಿತು ಅಭ್ಯರ್ಥಿಗಳು ಸಂಸ್ಥೆಯ ವೆಬ್‌ಸೈಟ್ ವಿಳಾಸ www.nwkrtc.karnataka.gov.in ನ್ನು ನಿರಂತರವಾಗಿ ಗಮನಿಸುವಂತೆ ತಿಳಿಸಲಾಗಿದೆ.

ಇದು ಅಂತಿಮ ಅವಕಾಶವಾಗಿದ್ದು, 24–05–2025ರ ನಂತರ ಚಾಲನಾ ವೃತ್ತಿ ಪರೀಕ್ಷೆಗೆ ಪುನಃ ಅವಕಾಶ ನೀಡಲಾಗುವುದಿಲ್ಲ ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

### ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗ ಸ್ಥಾಪನೆಯ ಭೂಮಿಪೂಜೆ

# ದೇಶದ ನಕ್ಷೆಯಲ್ಲಿ ಮುಕ್ತಿಮಂದಿರ ರಾರಾಜಿಸಲಿದೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಈ ಭಾಗದ ನಡೆದಾಡುವ ದೇವರು, ಪರಮ ತಪಸ್ವಿ ಲಿಂ.ವೀರಗಂಗಾಧರ ಜಗದ್ಗುರುಗಳ ಸಂಕಲ್ಪದಂತೆ ಭೂಕೈಲಾಸ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗ ಸ್ಥಾಪನೆಯ ಮಹೋನ್ನತ ಕಾರ್ಯ ಸಾಂಗವಾಗಿ ನೇರವೇರಲು ಲಿಂ.ಜಗದ್ಗುರುಗಳ ಆಶೀರ್ವಾದ ಕಾರಣವಾಗಿದೆ ಎಂದು ನೊಣವಿನಕೆರೆ ಕಾಡಸಿದ್ದೇಶ್ವರಮಠದ ಡಾ. ಕರಿವೃಷಭದೇಶೀಕೇಂದ್ರ ಶಿವಯೋಗೀಶ್ವರ ಮಹಾಸ್ವಾಮಿಗಳು ನುಡಿದರು.

ಅವರು ಸೋಮವಾರ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗ ಸ್ಥಾಪನೆಯ ಭೂಮಿಪೂಜೆ ನೆರವೇರಿಸಿ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಸುಮಾರು 4 ದಶಕಗಳ ಕಾಲದ ಕನಸು ಇದೀಗ ನನಸಾಗುತ್ತಿದ್ದು, ಲಿಂ.ಜ. ವೀರಗಂಗಾಧರ ಮಹಾಸ್ವಾಮಿಗಳ ತಪೋಭೂಮಿಯಲ್ಲಿ ಲಿಂ.ಶ್ರೀಗಳ ಸತ್ಯಸಂಕಲ್ಪ ಇದೀಗ ನೆರವೇರುವ ಕಾಲ ಬಂದಿದೆ. ರಾಜ್ಯದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ವಿಶೇಷ ಆಸಕ್ತಿಯ ಫಲವಾಗಿ ಈ ಬೃಹತ್ ಕಾರ್ಯ ನೆರವೇರಲಿದೆ. ತ್ರಿ-ಕೋಟಿ ಲಿಂಗ ಸ್ಥಾಪನೆ ಕಾರ್ಯ ಕೆಲವು ತಾಂತ್ರಿಕ ಕಾರಣಗಳಿಂದ ವಿಳಂಬವಾಗಿದ್ದು, ಕೇವಲ ಒಂದು ವರ್ಷದೊಳಗೆ ನಡೆಯುವ ಈ ಬೃಹತ್ ಯೋಜನೆಯಿಂದ ದೇಶದ ನಕ್ಷೆಯಲ್ಲಿ ಮುಕ್ತಿಮಂದಿರ ಕ್ಷೇತ್ರವು ರಾರಾಜಿಸಲಿದೆ. ಭಕ್ತರೆಲ್ಲರೂ ಸೇರಿ ಈ ಅಭೂತಪೂರ್ವ ಕಾರ್ಯವನ್ನು ಯಶಸ್ವಿಗೊಳಿಸಿ ಲಿಂ.ಶ್ರೀಗಳ ಕೃಪೆಗೆ ಪಾತ್ರರಾಗುವಂತೆ ಸಲಹೆ ನೀಡಿದರು.

ಮಾಜಿ ಶಾಸಕ ಹಾಗೂ ಹುಬ್ಬಳ್ಳಿ ಸಿದ್ಧಾರೂಢ ಮಠದ ಟ್ರಸ್ಟ್ ಕಮಿಟಿ ಅಧ್ಯಕ್ಷ ಡಿ.ಆರ್. ಪಾಟೀಲ ಮಾತನಾಡಿ, ಸರ್ವಧರ್ಮ ಸಮನ್ವಯಾಚಾರ್ಯ ಲಿಂ.ಜ. ವೀರಗಂಗಾಧರ ಶಿವಾಚಾರ್ಯ ಮಹಾಸ್ವಾಮಿಗಳು ಈ ಕ್ಷೇತ್ರದಲ್ಲಿ ಲೋಕ ಕಲ್ಯಾಣಕ್ಕಾಗಿ ತ್ರಿ-ಕೋಟಿ ಶಿವಲಿಂಗಗಳನ್ನು ಸ್ಥಾಪಿಸಬೇಕೆನ್ನುವ ಕನಸನ್ನು ಕಂಡಿದ್ದರು. ಅವರು ಲಿಂಗೈಕ್ಯರಾದರೂ ಸಹ ತ್ರಿಕೋಟಿ ಲಿಂಗ ಸ್ಥಾಪನೆ ಕಾರ್ಯ ನಡೆದಿರುವದಕ್ಕೆ ಅವರ ತಪಃಶಕ್ತಿ ಸಾಕ್ಷಿಯಾಗಿದೆ. ತ್ರಿಕೋಟಿ ಲಿಂಗ ಸ್ಥಾಪನೆಯಾಗುತ್ತಿರುವದು ದೇಶದಲ್ಲಿಯೇ ಪ್ರಥಮ. ತಪಸ್ವಿಗಳು ಸಂಕಲ್ಪ ಮಾಡಿದಲ್ಲಿ ಅವರ ಕೃಪಾದೃಷ್ಟಿಯಿಂದ ಅಂತಹ ಕಾರ್ಯಗಳು ಸಾಂಗವಾಗಿ ನೆರವೇರುತ್ತವೆ ಎಂದು ಹೇಳಿದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಮುಕ್ತಿಮಂದಿರದಲ್ಲಿ ತ್ರಿಕೋಟಿ ಲಿಂಗ ಸ್ಥಾಪನೆ ಆಗುತ್ತಿರುವುದು ನಮ್ಮೆಲ್ಲರ ಪುಣ್ಯ. ಶ್ರೀಕ್ಷೇತ್ರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳ ನಿರ್ಮಾಣ ಹಾಗೂ ದುರಸ್ತಿಗೆ ಕ್ರಮ ಕೈಗೊಳ್ಳುತ್ತೇನೆ ಎಂದರು.

ಮಾಜಿ ಶಾಸಕರುಗಳಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಈ ಬೃಹತ್ ಕಾರ್ಯಕ್ಕೆ ಸರ್ವ ರೀತಿಯಿಂದಲೂ ಸಹಕಾರ ನೀಡುವದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಕಲಾದಗಿ ಶ್ರೀಗಳು, ಶಂಕ್ರಣ್ಣ ಗೊರವರ, ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ, ಸ್ಥಾಯಿ ಸಮಿತಿ ಅಧ್ಯಕ್ಷ ವಿಜಯ ಕರಡಿ, ಪುಲಕೇಶಿ ಉಪನಾಳ, ಚನ್ನಪ್ಪ ಜಗಲಿ, ಪ್ರವೀಣ ಬಾಳಿಕಾಯಿ, ವಿರೂಪಾಕ್ಷ ಆದಿ, ರಾಜು ಕೊಟಗಿ, ಈಶ್ವರ ಬಂಡಿವಾಡ, ಮಲ್ಲಯ್ಯ ಭಕ್ತಿಮಠ, ವ್ಯಾಕ್ಸ್ ಪ್ರಾಪರ್ಟಿಸ್‌ನ ರಾಜೇಶ ಡಿ, ನೊಣವಿನಕೆರೆ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ನಟೇಶ, ವ್ಯವಸ್ಥಾಪಕ ಶಂಬಣ್ಣ, ರಾಜಣ್ಣ ಕುಂಬಿ, ಜಯಕ್ಕ ಕಳ್ಳಿ, ವಾಸ್ತು ತಜ್ಞ ಪರಿಮಳಾಚಾರ್ಯ, ಎಸ್. ಎಸ್. ಹಿರೇಮಠ, ಶಿವಯ್ಯ ಸಾಲಿಮಠ, ಬಾಪು ಕೊಪ್ಪದ, ವಿರೂಪಾಕ್ಷಪ್ಪ ದೊಡ್ಡಮನಿ, ಶಿವನಾಗಯ್ಯ ಹಿರೇಮಠ, ಶಿವಣ್ಣ ಕಟಗಿ ಮುಂತಾದವರಿದ್ದರು.

ತ್ರಿಕೋಟಿ ಯೋಜನೆಯ ಅನುಷ್ಠಾನದಲ್ಲಿ ಪ್ರಮುಖ ಪಾತ್ರ ವಹಿಸಿರುವ ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರು, ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ರಾಜ್ಯಾಧ್ಯಕ್ಷರು ಆಗಿರುವ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸರ್ವಧರ್ಮ ಸಮನ್ವಯಾಚಾರ್ಯ ಲಿಂ.ಜ.ವೀರಗಂಗಾಧರ ಶಿವಾಚಾರ್ಯ ಮಹಾಸ್ವಾಮಿಗಳು ಈ ಕ್ಷೇತ್ರದಲ್ಲಿ ಲೋಕ ಕಲ್ಯಾಣಕ್ಕಾಗಿ ತ್ರಿಕೋಟಿ ಶಿವಲಿಂಗಗಳನ್ನು ಸ್ಥಾಪಿಸಬೇಕೆನ್ನುವ ಮಹೋನ್ನತ ಕಾರ್ಯ ಇದೀಗ ಸಿದ್ಧಿಸುತ್ತಿದೆ ಎಂದು ನುಡಿದರು.

# ಸಮಾನ ವೇತನದ ಲಾಭ ಪಡೆಯಿರಿ



■ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯೋಗ ಖಾತ್ರಿ ಯೋಜನೆಯ ಕೂಲಿ ದರವನ್ನು ಎಪ್ರಿಲ್ 1ರಿಂದ 370 ರೂ.ಗೆ ಏರಿಕೆ ಮಾಡಲಾಗಿದ್ದು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ನರೇಗಾ ಯೋಜನೆಯಡಿ ದುಡಿಯುವ ಮೂಲಕ ಆರ್ಥಿಕವಾಗಿ ಸಬಲರಾಗಬೇಕು ಎಂದು ಸಹಾಯಕ ನಿರ್ದೇಶಕರಾದ (ಉಖಾ) ಕುಮಾರ ಪೂಜಾರ ಸಲಹೆ ನೀಡಿದರು.

ಸೋಮವಾರ ಗದಗ ತಾಲೂಕಿನ ತಿಮ್ಮಾಪುರ ಗ್ರಾಮದಲ್ಲಿ ದುಡಿಯೋಣ ಬಾ ಅಭಿಯಾನದ ನಿಮಿತ್ತ ಮಹಿಳಾ ಕೂಲಿಕಾರರ ಕಾಮಗಾರಿ ಪರಿಶೀಲಿಸಿ ಅವರು ಮಾತನಾಡಿದರು.

ಉದ್ಯೋಗ ಖಾತ್ರಿಯಲ್ಲಿ ಶೇ.50ರಷ್ಟಿರುವ ಮಹಿಳಾ ಕೂಲಿಕಾರ್ಮಿಕರ ಸಂಖ್ಯೆಯನ್ನು ಶೇ.60ಕ್ಕೆ ಹೆಚ್ಚಿಸುವುದು ಅಭಿಯಾನದ ಉದ್ದೇಶವಾಗಿದೆ. ಮಹಿಳಾ ಸಬಲೀಕರಣವನ್ನು ನರೇಗಾ ಯೋಜನೆ ಮೂಲಕ ಕೈಗೊಳ್ಳುವುದು ಅಭಿಯಾನದ ಉದ್ದೇಶವಾಗಿದೆ. ಮಹಿಳೆಯರ ಅನಕೂಲಕ್ಕಾಗಿ ಕೂಸಿನ ಮನೆಯನ್ನು ತೆರೆಯಲಾಗಿದ್ದು, ಮೂರು ವರ್ಷದೊಳಗಿನ ಮಕ್ಕಳನ್ನು ಅಲ್ಲಿಗೆ ಸೇರಿಸಬಹುದಾಗಿದೆ ಎಂದರು.

ಗ್ರಾಮೀಣ ಪ್ರದೇಶದ ಮಹಿಳೆಯರು ಸ್ವ-ಸಹಾಯ ಸಂಘಗಳ ಮೂಲಕ ಒಟ್ಟಾಗಿ ಸೇರುವ ಪ್ರಯತ್ನವಾಗುತ್ತಿದೆ. ಇದೇ ಮಾದರಿಯಲ್ಲಿ ಮಹಿಳೆಯರೆಲ್ಲರೂ ಒಟ್ಟಾಗಿ ಸೇರಿ ಉದ್ಯೋಗ ಖಾತ್ರಿ ಯೋಜನೆಯಡಿ ಉದ್ಯೋಗ ಪಡೆದುಕೊಂಡು ಗ್ರಾಮೀಣ ಸಮುದಾಯ ಕಾಮಗಾರಿಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ನಂತರ ಕೂಸಿನ ಮನೆಗೆ ಭೇಟಿ ನೀಡಿ ಆರೈಕೆದಾರರಿಗೆ ಮತ್ತು ಪಿಡಿಒ ಅವರಿಗೆ ಅಗತ್ಯ ಸಲಹೆ ಸೂಚನೆ ನೀಡಿದರು. ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಶಿವಲೀಲಾ ಗೂಳಪ್ಪನವರ, ತಾಲೂಕು ಐಇಸಿ ಸಂಯೋಜಕ ವೀರೇಶ ಬಸನಗೌಡ್ರ, ಟಿಎಇ ನವೀನ ಬಸರಿ, ಬಿಎಫ್‌ಟಿ ಮೈಲಾರಪ್ಪ ಸೋಮನಕಟ್ಟಿ, ಜಿಕೆಎಂ ಪವಿತ್ರಾ ಯತ್ನಟ್ಟಿ, ಕಾಯಕ ಬಂಧುಗಳು ಇದ್ದರು.

### ಮಹಿಳೆಯ ಕೊಲೆ ಆರೋಪಿಯನ್ನು ಪತ್ತೆಹಚ್ಚಿದ ಪೊಲೀಸರು | ಕಾರು, ಬೈಕ್ ವಶಕ್ಕೆ

# ಪ್ರಿಯತಮನೇ ಕೊಲೆಗಾರ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಸೂರಣಗಿ ಗ್ರಾಮದ ಬಯಲು ಬಸವಣ್ಣ ದೇವರ ದೇವಸ್ಥಾನದ ಬಳಿ ಮಹಿಳೆಯೊಬ್ಬಳನ್ನು ಕೊಲೆ ಮಾಡಿ ಎಸೆದಿದ್ದ ಆರೋಪಿಗಳನ್ನು ಲಕ್ಷ್ಮೇಶ್ವರದ ಪೊಲೀಸರು ಪತ್ತೆ ಹಚ್ಚಿ, ಘಟನೆಯಲ್ಲಿ ಆರೋಪಿಗಳು ಬಳಸಿದ್ದ ಕಾರು ಹಾಗೂ ಬೈಕ್‌ನ್ನು ವಶಕ್ಕೆ ಪಡೆದಿದ್ದಾರೆ.

ಈ ಕುರಿತು ಸೋಮವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ, ಲಕ್ಷ್ಮೇಶ್ವರ ತಾಲೂಕು ನೆಲೂಗಲ್ಲ ಗ್ರಾಮದ ನಿವಾಸಿ ಲಕ್ಷ್ಮೀ ಆನಂದ ಇಂಗಳಗಿ (33) ಕೊಲೆಯಾದ ಮಹಿಳೆ. ಈಕೆ ಗಂಡನೊಡನೆ ಜಗಳ ಮಾಡಿಕೊಂಡು ನೆಲೂಗಲ್ಲನ ತನ್ನ ತವರು ಮನೆಯಲ್ಲಿ ವಾಸಿವಾಗಿದ್ದಳು. ಜೀವನೋಪಾಯಕ್ಕಾಗಿ ಮಂಗಳೂರಿಗೆ ದುಡಿಯಲು ಹೋದಾಗ ಅಲ್ಲಿ ಹಾವೇರಿ ಜಿಲ್ಲೆ ಶಿಗ್ಗಾವಿ ತಾಲೂಕು ಗೊಟಗೋಡಿ ಗ್ರಾಮದ ಸುನೀಲ್ ಅಶೋಕ ಮಲ್ಲಾರಿ ಅವನೊಂದಿಗೆ ಸ್ನೇಹ ಬೆಳೆಸಿದ್ದಳು. ಮೃತ ಮಹಿಳೆ ಪ್ರಿಯಕರ ಸುನೀಲನಿಗೆ ಹಣ ಕೊಡುವಂತೆ ಪೀಡಿಸುತ್ತಿದ್ದಳು ಎಂದು ತಿಳಿದುಬಂದಿದೆ. ಇದರಿಂದಾಗಿ ರೊಚ್ಚಿಗೆದ್ದಿದ್ದ ಸುನೀಲ ಎ.22ರಂದು ರಾತ್ರಿ ತನ್ನ ಮೂವರು ಸಹಚರರೊಂದಿಗೆ ಕೂಡಿಕೊಂಡು ಕಾರಿನಲ್ಲಿ ಮಹಿಳೆಯನ್ನು ಮಂಗಳೂರಿನತ್ತ ಕರೆದುಕೊಂಡು ಹೋಗುತ್ತಿದ್ದ. ಈ ಸಮಯದಲ್ಲಿ ಹಿಂದಿನಿಂದ ಮಹಿಳೆಯ ಕುತ್ತಿಗೆಗೆ ಹಗ್ಗ ಬಿಗಿದು ಆಕೆಯನ್ನು ಸಾಯಿಸಿ ಸೂರಣಗಿ ಗ್ರಾಮದ ಹತ್ತಿರ ಬಿಸಾಕಿ ಹೋಗಿದ್ದರು. ಸದರಿ ಪ್ರಕರಣವನ್ನು ಬೇಧಿಸುವಲ್ಲಿ ಲಕ್ಷ್ಮೇಶ್ವರ ಪೊಲೀಸರು ಯಶಸ್ವಿಯಾಗಿದ್ದಾರೆ ಎಂದರು.

ಪ್ರಕರಣ ಬೇಧಿಸುವಲ್ಲಿ ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ನಾಗರಾಜ ಗಡಾದ, ಕ್ರೈಮ್ ಪಿಎಸ್‌ಐ ಟಿ.ಕೆ. ರಾಠೋಡ, ಸಿಬ್ಬಂದಿಗಳಾದ ಮಹಾವೀರ ಸದರಣ್ಣವರ, ಆರ್.ಎಸ್. ಯರಗಟ್ಟಿ ಎನ್.ಎ. ಮೌಲ್ವಿ, ಎಮ್.ಎ. ಶೇಖ, ಡಿ.ಎಸ್. ನದಾಫ್, ಪಾಂಡುರಂಗರಾವ್, ಹೆಚ್.ಐ. ಕಲ್ಲಣ್ಣವರ, ಮಧುಚಂದ್ರ ಧಾರವಾಡ, ಸೋಮು ವಾಲ್ಮೀಕಿ, ನಂದಯ್ಯ ಮಠಪತಿ ರಾಮು ಮಾಳೊತ್ತರ, ಲೋಹಿತ ಹಮ್ಮಿಗಿ, ಕೃಷ್ಣಾ ಹುಲಗೂರ, ಅಪ್ಪಣ್ಣ ರಾಠೋಡ, ಗುರು ಬೂದಿಹಾಳ, ಸಂಜು ಕೊರಡೂರ ಭಾಗವಹಿಸಿದ್ದರು.

ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ನಾಗರಾಜ ಗಡಾದ ನೇತೃತ್ವದಲ್ಲಿ ತಂಡ ರಚಿಸಲಾಗಿತ್ತು. ಆರೋಪಿಗಳ ಪತ್ತೆ ಕಾರ್ಯಕ್ಕಿಳಿದ ಪೊಲೀಸರು ಸುನೀಲ್ ಅಶೋಕ ಮಲ್ಲಾರಿ, ಸಿದ್ದಪ್ಪ ನಾಗಪ್ಪ ಕುಬಸದ, ನಟರಾಜ ಈರಪ್ಪ ನಿರಲಗಿ ಹಾಗೂ ರಮೇಶ ಉರ್ಫ ಮುತ್ತುರಾಜ ದೇವಪ್ಪ ತಳವಾರ ಎಂಬುವವರನ್ನು ಬಂಧಿಸಿದ್ದಾರೆ. ಅತಿ ಕಡಿಮೆ ಸಮಯದಲ್ಲಿ ಆರೋಪಿಗಳನ್ನು ಪತ್ತೆ ಹಚ್ಚಿದ ಲಕ್ಷ್ಮೇಶ್ವರ ಪೊಲೀಸರನ್ನು ಅಭಿನಂದಿಸಿ ಬಹುಮಾನ ಘೋಷಣೆ ಮಾಡಲಾಗಿದೆ ಎಂದು ಎಸ್‌ಪಿ ಬಿ.ಎಸ್. ನೇಮಗೌಡ ತಿಳಿಸಿದರು.




VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka